# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆರಡನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ:21ನೇ ಫೆಬ್ರವರಿ, 2024**

**(ಸಮಯ: ಬೆಳಗ್ಗೆ: 10.00 ಗಂಟೆಗೆ)**

* * *

### 01. ನೂತನ ಶಾಸಕರ ಪ್ರಮಾಣ ವಚನ

### 02. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ

"2024ನೇ ಫೆಬ್ರವರಿ, 12ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:13.02.2024ರಂದು **ಶ್ರೀ ಯು.ಬಿ. ವೆಂಕಟೇಶ್** ರವರು ಸೂಚಿಸಿದ ಪ್ರಸ್ತಾವದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ.

### 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಕಾರ್ಯದರ್ಶಿಯವರು:**

01. ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ, 2024
02. ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ, 2024
03. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2024

### 04. ವರದಿಯನ್ನೊಪ್ಪಿಸುವುದು

**ಶ್ರೀ ಎಂ. ನಾಗರಾಜು (ಅಧ್ಯಕ್ಷರು, ಹಕ್ಕುಬಾಧ್ಯತಾ ಸಮಿತಿ)** ಅವರು 2023-24ನೇ ಸಾಲಿನ 101ನೇ ವಿಶೇಷ ವರದಿ ಹಾಗೂ 102ನೇ ವರದಿಗಳನ್ನೊಪ್ಪಿಸುವುದು.

.2..

## 05. ಜಂಟಿ ಸದನ ಸಮಿತಿ ಕಾಲಾವಕಾಶವನ್ನು ವಿಸ್ತರಿಸುವ ಪ್ರಸ್ತಾವ

**ಡಾ: ತೇಜಸ್ವಿನಿ ಗೌಡ (ಅಧ್ಯಕ್ಷರು, ವಿಶೇಷ ಜಂಟಿ ಸದನ ಸಮಿತಿ) ಅವರು:–**

"ರಾಜ್ಯದಲ್ಲಿ 2020–21ನೇ ಸಾಲಿನಲ್ಲಿ ಹೊಸದಾಗಿ ನರ್ಸಿಂಗ್ ಮತ್ತು ಅಲೈಡ್ ಹೆಲ್ತ್ ಸೈನ್ಸಸ್ ಕಾಲೇಜುಗಳಿಗೆ ಮೂಲ ಸೌಕರ್ಯಗಳಿಲ್ಲದಿದ್ದರೂ ಅನುಮತಿ ನೀಡಿ, ಇಂಡಿಯನ್ ನರ್ಸಿಂಗ್ ಕೌನ್ಸಿಲ್ ಅವರು ಹೊರಡಿಸಿರುವ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವ ವಿಷಯವನ್ನು ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಜಂಟಿ ಸದನ ಸಮಿತಿಯ ಅವಧಿಯನ್ನು ದಿನಾಂಕ:14.01.2024ರಿಂದ 13.01.2025ರವರೆಗೆ ಹನ್ನೆರಡು ತಿಂಗಳ ಕಾಲ ವಿಸ್ತರಿಸಲು ಪ್ರಸ್ತಾವವನ್ನು ಮಂಡಿಸುವುದು".

## 06. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ, 2024
**ಶ್ರೀ ಕ್ಯಾತಸಂದ್ರ ರಾಜಣ್ಣ (ಮಾನ್ಯ ಸಹಕಾರ ಸಚಿವರು)**

ಅ) ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ, 2024
**ಶ್ರೀ ಕ್ಯಾತಸಂದ್ರ ರಾಜಣ್ಣ (ಮಾನ್ಯ ಸಹಕಾರ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2024
**ಶ್ರೀ ಪ್ರಿಯಾಂಕ ಖರ್ಗೆ (ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 07. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**

| | |
|---|---|
| 2ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀಮತಿ ಹೇಮಲತಾ ನಾಯಕ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 20(216) | ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |
| 2ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕೆ. ಹರೀಶ್ ಕುಮಾರ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 23(153)<br>2ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಸುನೀಲ್ ವಲ್ಯಾಪುರ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 24(105)<br>2ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ವೈ.ಎಂ. ಸತೀಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 30(130) | ಮಾನ್ಯ ಕಂದಾಯ ಸಚಿವರು |
| 3ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಡಿ.ಎಸ್. ಅರುಣ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 32(366) | ಮಾನ್ಯ ಲೋಕೋಪಯೋಗಿ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

## 08. ಶೂನ್ಯವೇಳೆ ಪ್ರಸ್ತಾವಗಳು

## 09. ವಿತ್ತೀಯ ಕಾರ್ಯಕಲಾಪ

2024-25ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಸಾಮಾನ್ಯ ಚರ್ಚೆ

**ಎರಡನೇ ದಿನ**

## 10. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಯು.ಬಿ. ವೆಂಕಟೇಶ್** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ವಹಿಸಿರುವ ಕಾಮಗಾರಿಗಳಿಗೆ ಎರಡೆರಡು ಬಾರಿ ಬಿಲ್ ಪಾವತಿಯಾಗಿರುವುದರಿಂದ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿರುವ ಕುರಿತು ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦2. **ಶ್ರೀಯುತರುಗಳಾದ ವೈ.ಎಂ. ಸತೀಶ್, ಡಿ.ಎಸ್. ಅರುಣ್, ಕೆ.ಎಸ್. ನವೀನ್ ಹಾಗೂ ಎಸ್. ರುದ್ರೇಗೌಡ** ಅವರುಗಳು ತುಂಗಭದ್ರಾ ನದಿಯಲ್ಲಿ ಹಾನಿಕಾರಕ ಲೋಹಗಳು ಪತ್ತೆಯಾಗಿದ್ದು, ಕಲುಷಿತ ನೀರು ಕುಡಿಯಲು ಮತ್ತು ಕೃಷಿಗೆ ಬಳಸಲು ಯೋಗ್ಯವಲ್ಲದಿರುವುದರಿಂದ ಶುದ್ಧೀಕರಿಸಲು ಕ್ರಮ ಕೈಗೊಳ್ಳುವ ಕುರಿತು ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

೦3. **ಶ್ರೀ ಎಸ್.ವ್ಹಿ.ಸಂಕನೂರ** ಅವರು ಕ್ರೀಡಾ ಪ್ರಾಧಿಕಾರದಲ್ಲಿ ಸಂಚಿತ ವೇತನದ ಆಧಾರದ ಮೇಲೆ 15 ರಿಂದ 30 ವರ್ಷಗಳವರೆಗೆ ಕಾರ್ಯನಿರ್ವಹಿಸುತ್ತಿರುವ ಸುಮಾರು 85 ಕ್ರೀಡಾ ತರಬೇತುದಾರರನ್ನು ಖಾಯಂಗೊಳಿಸುವ/ಕ್ರೀಡಾ ಇಲಾಖೆಯಲ್ಲಿ ವಿಲೀನಗೊಳಿಸುವ ಕುರಿತು ಮಾನ್ಯ ಯುವಜನ ಸೇವೆಗಳು, ಕ್ರೀಡೆಗಳು ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

೦4. **ಶ್ರೀ ಬಿ.ಎಂ. ಫಾರೂಖ್** ಅವರು ತುಳು ಭಾಷೆಯನ್ನು ಕರ್ನಾಟಕ ರಾಜ್ಯದ ಎರಡನೇ ಭಾಷೆಯನ್ನಾಗಿ ಘೋಷಿಸಿ ಭಾರತ ಸಂವಿಧಾನದ 8ನೇ ಪರಿಚ್ಛೇದದಲ್ಲಿ ಸೇರ್ಪಡೆ ಮಾಡುವ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

## 11. ನಿಯಮ 330ರ ಮೇರೆಗೆ

೦1. **ಶ್ರೀಯುತರುಗಳಾದ ಕೆ.ಎಸ್. ನವೀನ್, ಕೇಶವ ಪ್ರಸಾದ್ ಎಸ್, ಡಿ.ಎಸ್. ಅರುಣ್ ಹಾಗೂ ಹೆಚ್.ಎಸ್. ಗೋಪಿನಾಥ್** ಅವರುಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಿವಿಧ ಮೂಲಗಳಿಂದ ಸಂಗ್ರಹವಾಗುವ ತೆರಿಗೆ ಹಾಗೂ ಆದಾಯ ಸೇರಿದಂತೆ ಬೆಂಗಳೂರಿನಲ್ಲಿ ಸಂಗ್ರಹವಾಗುವ ಜಿ.ಎಸ್.ಟಿ. ತೆರಿಗೆಯಲ್ಲಿನ ಖರ್ಚು/ವೆಚ್ಚಗಳ ಸಮಗ್ರ ಚಿತ್ರಣದ ಬಗ್ಗೆ ಶ್ವೇತಪತ್ರ ಹೊರಡಿಸುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಎಸ್.ಎಲ್. ಭೋಜೇಗೌಡ ಹಾಗೂ ಮಧು ಜಿ. ಮಾದೇಗೌಡ** ಅವರುಗಳು ಸರ್ಕಾರಿ ಹಾಗೂ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧ್ಯಾಪಕರುಗಳಿಗೆ 6 ಮತ್ತು 7ನೇ ವೇತನ ಆಯೋಗದ ಶಿಫಾರಸ್ಸಿನಂತೆ ವೇತನ ಬಾಕಿಯನ್ನು ಪಾವತಿಸದಿರುವುದು ಹಾಗೂ ಪಾಲಿಟೆಕ್ನಿಕ್‌ಗಳ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿಯಾಗದಿರುವ ಕಾರಣ ಪ್ರಾಂಶುಪಾಲರ ಹುದ್ದೆಗಳು ಖಾಲಿಯಿರುವುದರಿಂದ ಉಂಟಾಗಿರುವ ಗಂಭೀರ ಪರಿಸ್ಥಿತಿಯ ಕುರಿತು ಪ್ರಸ್ತಾಪಿಸುವುದು.

೦3. **ಡಾ: ವೈ.ಎ. ನಾರಾಯಣಸ್ವಾಮಿ** ಅವರು ಬೆಂಗಳೂರು ಟರ್ಫ್ ಕ್ಲಬ್‌ನವರು ನೂರಾರು ಕೋಟಿ ರೂಪಾಯಿಗಳ ತೆರಿಗೆಯನ್ನು ಪಾವತಿಸದೆ ಸರ್ಕಾರಕ್ಕೆ ವಂಚಿಸಿರುವ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ವಿಧಾನಸೌಧ, ವಿಕಾಸಸೌಧ ಮತ್ತು ಶಾಸಕರ ಭವನದ ಆವರಣದಲ್ಲಿ ವಿಶ್ವಕರ್ಮ ಸಮಾಜದ ಭಗವಾನ್ ವಿಶ್ವಕರ್ಮ ಅಥವಾ ಅಮರಶಿಲ್ಪಿ ಜಕಣಾಚಾರಿ ಪ್ರತಿಮೆಯನ್ನು ಸ್ಥಾಪಿಸುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**
**www.kla.kar.nic.in/council/council.htm**